ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು - 560 001.**

ಸಂಖ್ಯೆ: DPI-CPI0C1-3(OTH)/5/2023/E-1684027 **ದಿನಾಂಕ:** 03-03-2025

**ಜ್ಞಾಪನ**

**ವಿಷಯ:** "She Box Portal" ಅನ್ನು ಅನುಷ್ಠಾನಗೊಳಿಸಲು ನೋಡಲ್ ಅಧಿಕಾರಿಯನ್ನು ನೇಮಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇ ಪಿ 61 ಎಸ್ ಟಿ ಬಿ 2025 ದಿನಾಂಕ: 06-02-2025.

*********

ಶಾಲಾ ಶಿಕ್ಷಣ ಇಲಾಖೆ ರಾಜ್ಯ, ಜಿಲ್ಲಾ, ತಾಲ್ಲೂಕು ಹಾಗೂ ಶಾಲೆಗಳ ಎಲ್ಲಾ ಕಛೇರಿಗಳಲ್ಲಿಯೂ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ-2013ರ ಅಡಿ "She Box (Sexual Harassment Electronic Box) Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ಶಾಲಾ ಶಿಕ್ಷಣ ಇಲಾಖೆಯ ಕಛೇರಿಗಳು ಮತ್ತು ಶಾಲಾ ಹಂತದವರೆವಿಗೆ ನೋಡಲ್ ಅಧಿಕಾರಿಗಳ ನೇಮಕ ಮಾಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸರ್ಕಾರದ ಸುತ್ತೋಲೆ ದಿನಾಂಕ: 13.09.2024 ರ ಪತ್ರವನ್ನು ಲಗತ್ತಿಸಿ ಕಳುಹಿಸುತ್ತಾ, ಅದರಂತೆ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಿದೆ ಹಾಗೂ ಜಿಲ್ಲಾ ಹಂತದ ನೋಡಲ್ ಅಧಿಕಾರಿಗಳ ಕ್ರೋಢೀಕೃತ ಮಾಹಿತಿಯನ್ನು **ಶ್ರೀಮತಿ ರಾಘವಿ ಹಿರಿಯ ಸಹಾಯಕ ನಿರ್ದೇಶಕರು**, ಸಾರ್ವಜನಿಕ ಸಂಪರ್ಕ ಅಧಿಕಾರಿ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಒದಗಿಸುವಂತೆ ಸೂಚಿಸಿದೆ.

(ಕಛೇರಿ ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟಿದೆ.)

**ವಿಜಯ ಈ ರವಿಕುಮಾರ್ ಕೆ.ಎ.ಎಸ್.**
ಜಂಟಿ ನಿರ್ದೇಶಕರು(ಆಡಳಿತ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು,**

1. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ನಂ: 107, "ಕಾವೇರಿ ಭವನ", 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕೆ.ಜಿ.ರಸ್ತೆ, ಬೆಂಗಳೂರು-09.
2. ಮಾನ್ಯ ಸರ್ಕಾರದ ಜಂಟಿ ಕಾರ್ಯದರ್ಶಿಗಳು(ಸೇವೆಗಳು-2), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟಡ ಬೆಂಗಳೂರು.
3. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳುರು ಇವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಶ್ರೀಮತಿ ರಾಘವಿ ಹಿರಿಯ ಸಹಾಯಕ ನಿರ್ದೇಶಕರು, ಸಾರ್ವಜನಿಕ ಸಂಪರ್ಕ ಅಧಿಕಾರಿ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು – ಅಗತ್ಯ ಕ್ರಮಕ್ಕಾಗಿ
5. ಕಛೇರಿ ಪ್ರತಿ.

4/3/25

20

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಪಿ 61 ಎಸ್‌ಟಿಬಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:06.02.2025.

**TOP PRIORITY**

**ಇವರಿಂದ:**

**ಸರ್ಕಾರದ ಪ್ರಧಾನ ಕಾರ್ಯದರ್ಶಿ,**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
ಬಹುಮಹಡಿ ಕಟ್ಟಡ, ಬೆಂಗಳೂರು.

**ಇವರಿಗೆ:**

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು.
3. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ.
5. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ.
6. ನಿರ್ದೇಶಕರು ಮುದ್ರಣ ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, 8ನೇ ಮೈಲಿ, ಆರ್.ವಿ. ಕಾಲೇಜು ಅಂಚೆ, ಕೆಂಚನಹಳ್ಳಿ, ಮೈಸೂರು ರಸ್ತೆ, ಬೆಂಗಳೂರು.

**ಮಾನ್ಯರೆ,**

**ವಿಷಯ:** "She Box Portal" ಅನ್ನು ಅನುಷ್ಠಾನಗೊಳಿಸಲು ನೋಡಲ್ ಅಧಿಕಾರಿಯನ್ನು ನೇಮಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಮಮಇ 55 ಕೆ.ಎಸ್.ಡಬ್ಲ್ಯೂ 2024 ದಿನಾಂಕ:13.09.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸಿದೆ. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ-2013ರ ಅಡಿ "She Box Portal" ಅನ್ನು ಅನುಷ್ಠಾನಗೊಳಿಸುವ ಸಂಬಂಧ ತಮ್ಮ ಅಧೀನದ ಎಲ್ಲ ಕಚೇರಿಗಳು ಮತ್ತು ಶಾಲಾ ಹಂತದವರೆಗೆ ನೋಡಲ್ ಅಧಿಕಾರಿಗಳನ್ನು ತಕ್ಷಣ ನೇಮಕ ಮಾಡಿ ಸದರಿ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ದಿನಾಂಕ:15.02.2025 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ನಂ:107, "ಕಾವೇರಿ ಭವನ", 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕೆ.ಜಿ.ರಸ್ತೆ, ಬೆಂಗಳೂರು-09. (email: kscwbang123@gmail.com ಹಾಗೂ prlsecy-wcd@karnataka.gov.in,) ಇವರಿಗೆ ಕಳುಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತಳಾಗಿದ್ದೇನೆ.

ತಮ್ಮ ವಿಶ್ವಾಸಿ,

6/2/2025

**(ಶಕುಂತಲಾ ಚೌಗಲಾ)**
**ಸರ್ಕಾರದ ಜಂಟಿ ಕಾರ್ಯದರ್ಶಿ(ಸೇವೆಗಳು-2),**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.**

Scanned by CamScanner

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 55 ಕೆ.ಎಸ್.ಡಬ್ಲ್ಯೂ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:13.09.2024.

## ಸುತ್ತೋಲೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯ, ನವ ದೆಹಲಿ, ಇವರು ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ-2013ರ ಅಡಿ "She Box Portal ಅನ್ನು ಹೊಸದಾಗಿ ಉನ್ನತೀಕರಿಸಿ ಅನುಷ್ಠಾನಗೊಳಿಸಿದ್ದು, ಅದನ್ನು ದೇಶಾದ್ಯಂತ ಜಾರಿಗೆ ತರಲಾಗುತ್ತಿದೆ. ಈ ನಿಟ್ಟಿನಲ್ಲಿ ಆಧ್ಯತೆಯ ಮೇರೆಗೆ ಕರ್ನಾಟಕ ರಾಜ್ಯದಲ್ಲೂ She Box Portalನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ-2013ರ ಅಡಿ "She Box Portal ಅನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ನೇಮಿಸಿರುವ ನೋಡಲ್ ಅಧಿಕಾರಿಗಳ ವಿವರಗಳನ್ನು ಅಪ್ ಲೋಡ್ ಮಾಡಬೇಕಾಗಿರುವುದು ಕಡ್ಡಾಯವಾಗಿರುತ್ತದೆ.

ಆದ್ದರಿಂದ ಎಲ್ಲ ಜಿಲ್ಲೆಯ ಜಿಲ್ಲಾಧಿಕಾರಿಗಳು ನೋಡಲ್ ಅಧಿಕಾರಿಗಳಾಗಿರುವುದರಿಂದ ಇವರು ತಮ್ಮ ಹಂತದಲ್ಲಿಯೇ ವಿವರಗಳನ್ನು She Box Portalನಲ್ಲಿ ಅಪ್ ಲೋಡ್ ಮಾಡುವಂತೆ ಹಾಗೂ ಉಳಿದ ಇಲಾಖೆಗಳು ಹಾಗೂ ಅಧೀನ ಕಛೇರಿಗಳಲ್ಲಿ ನೇಮಿಸಿರುವ ನೋಡಲ್ ಅಧಿಕಾರಿಗಳ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ (ಪ್ರತಿ ಲಗತ್ತಿಸಿದೆ) ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ನಂ:107, "ಕಾವೇರಿ ಭವನ", 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ,ಕೆ.ಜಿ.ರಸ್ತೆ, ಬೆಂಗಳೂರು-09. (email: kscwbang123@gmail.com ಹಾಗೂ prlsecy-wcd@karnataka.gov.in,) ಇವರಿಗೆ ಕಳುಹಿಸುವಂತೆ ಕೋರಿದೆ.

13. 09. 2024

(ಡಾ. ಶಮ್ಲಾ ಇಕ್ಬಾಲ್)
ಸರ್ಕಾರದ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಮತ್ತು ವಿಕಲಚೇತನರ ಹಾಗೂ ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

AA (Admin)

# KARNATAKA STATE COMMISSION FOR WOMEN

## Details of Departmental State Nodal Officer(SNO) (ACS/PS/Secretary in charge of the Department

**Department Name:**

**SNO Name :**

**Designation :**

**Email ID :**

**Mobile Number :**

**Land Line Number (With STD Code)**

**District :**

**Pin Code :**

**Office Address :**



Generated from eOffice by LEKHA B G, WCD-EA-E(LBG), SENIOR ASSISTANT, WOMEN AND CHILD WELFARE SEC on [illegible] 03:27 PM